**ಪ್ರಧಾನ ಸಿವಿಲ್ ಜಡ್ಜ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಭಟ್ಕಳ.**

**ಸಿ. ಸಿ. ನಂಬರಃ 1893/2022**

**ಫಿರ್ಯಾದುದಾರರು** ದಿ. ಜನತಾ ಕೊ.ಆಪರೇಟಿವ್ ಕ್ರೆಡಿಟ್ ಸೊಸೈಟಿ ಲಿಮಿಟೆಡ್,
ಮುಖ್ಯ ಶಾಖೆ, ಭಟ್ಕಳ.
ಪ್ರತಿನಿಧಿಸುವವರು ಶಾಖಾ ವ್ಯವಸ್ಥಾಪಕರು
ಶ್ರೀ ನಾಗೇಶ ತಂದೆ ಮಾದೇವ ದೇವಾಡಿಗ

**– ವಿರುದ್ಧ –**

**ಆರೋಪಿತರು** ಶ್ರೀ ಕೆ. ಮೊಹಮ್ಮದ ಶರೀಫ್ ತಂದೆ ಕೆ. ಖಾದರ್
ಸಾಃ ಓಯಾಸಿಸ್ ಅಪಾರ್ಟಮೆಂಟ್ಸ್, ರೂಮ್ ನಂ.005,
ಮೂಸಾ ನಗರ ರಸ್ತೆ, ಜಾಲಿ, ಭಟ್ಕಳ.

**ಆಪಾದನೆ**

ಆರೋಪಿಯಾದ ನೀವು ದಿನಾಂಕಃ 12-10-2018 ರಂದು ಪಿರ್ಯಾದಿ ಸೊಸೈಟಿಯಲ್ಲಿ ರೂ.50,000/- (ರೂಪಾಯಿ ಐವತ್ತು ಸಾವಿರ ಮಾತ್ರ) ಹಣವನ್ನು ಸಾಲದ ಖಾತೆ ಸಂಖ್ಯೆ CDL-3244 ರಲ್ಲಿ ಸಾಲವಾಗಿ ಪಡೆದುಕೊಂಡಿದ್ದು, ಸದ್ರಿ ಸಾಲವನ್ನು ಬಡ್ಡಿ ಸಹಿತವಾಗಿ ಹಿಂತಿರುಗಿಸುವುದಾಗಿ ಒಪ್ಪಿಕೊಂಡು ಕೆಲವು ದಾಖಲೆ ಪತ್ರಗಳನ್ನು ಕೊಟ್ಟಿರುತ್ತೀರಿ. ಆದರೆ ಒಪ್ಪಿಕೊಂಡಂತೆ ಮರುಪಾವತಿ ಮಾಡಿರುವುದಿಲ್ಲ. ಈ ಕುರಿತು ಪಿರ್ಯಾದಾರರು ನಿಮ್ಮನ್ನು ಹಲವಾರು ಬಾರಿ ಸಾಲ ಮರುಪಾವತಿ ಮಾಡುವಂತೆ ಕೇಳಿಕೊಂಡಾಗ, ಸದ್ರಿ ಸಾಲದ ಹಣವನ್ನು ಮರು ಪಾವತಿಸುವ ಸಲುವಾಗಿ ನೀವು ಸಿಂಡಿಕೇಟ ಬ್ಯಾಂಕ್, ಭಟ್ಕಳ ಶಾಖೆಯ ಚೆಕ್ ನಂಬರ್ 436458 ನ್ನು ರೂ.61,500/- (ರೂಪಾಯಿ ಆರುವತ್ತೊಂದು ಸಾವಿರದಾ ಐದು ನೂರು ಮಾತ್ರ)ಕ್ಕೆ ದಿನಾಂಕಃ 22-06-2021 ಎಂದು ನಮೂದಿಸಿ ಫಿರ್ಯಾದಿದಾರರಿಗೆ ನೀಡಿರುತ್ತೀರಿ, ಸದ್ರಿ ಚೆಕ್ಕನ್ನು ಫಿರ್ಯಾದಿ ಭಟ್ಕಳ ಅರ್ಬನ್ ಕೊ-ಆಪರೇಟಿವ್ ಬ್ಯಾಂಕ್, ಬಝಾರ ಶಾಖೆಯಲ್ಲಿ ನಗಧೀಕರಣಕ್ಕಾಗಿ ಹಾಜರಪಡಿಸಿದಾಗ, “Funds Insufficient" ಎಂಬ ಹಿಂಬರಹದೊಂದಿಗೆ ದಿನಾಂಕಃ 30-07-2021 ರಂದು ವಾಪಸ್ಸು ಬಂದಿರುತ್ತದೆ.

ನಂತರ ಫಿರ್ಯಾದಿದಾರರು ಚೆಕ್ಕಿನ ಹಣವನ್ನು ಸಂದಾಯ ಮಾಡುವಂತೆ, ದಿನಾಂಕಃ 11-08-2021 ರಂದು ತಮ್ಮ ವಕೀಲರ ಮೂಲಕ ಲೀಗಲ್ ನೋಟಿಸನ್ನು ನಿಮಗೆ ಕಳುಹಿಸಿದ್ದು, ಸದ್ರಿ ನೋಟಿಸು Not-

claimed ಅಂತಾ ದಿನಾಂಕಃ 14-08-2021 ರಂದು ವಾಪಾಸ್ಸು ಬಂದಿರುತ್ತದೆ. ಆದರೆ ಇಂದಿನವರೆಗೂ ಸಹ ನೀವು ಚೆಕ್ಕಿನ ಹಣವನ್ನು ಪಾವತಿ ಮಾಡದೆ ಆ ಮೂಲಕ ನೆಗೋಶಿಯೇಬಲ್ ಇನ್ಸ್ಟ್ರುಮೆಂಟ ಆಕ್ಟ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವೆಸಗಿದ್ದೀರಿ ಎಂದು ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಪ್ರಶ್ನೆ - ನಿಮ್ಮ ಮೇಲೆ ಹೊರಿಸಲಾದ ಆಪಾದನೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ - **Yes**

ಪ್ರಶ್ನೆ - ನೀವು ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುತ್ತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರ – **Pleaded not guilty**.

(ಮೇಲಿನ ಆಪಾದನೆಯನ್ನು ಆಪಾದಿತನಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಯಥಾರೀತಿ ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

**Sd/-**

**(ಶ್ರೀಮತಿ. ದೀಪಾ ಅರಳಗುಂಡಿ)**

ಪ್ರಧಾನ ಸಿವಿಲ್ ಜಡ್ಜ ಮತ್ತು

ದಿನಾಂಕಃ 02-12-2024 ಪ್ರ. ದ. ನ್ಯಾಯಿಕ ದಂಡಾಧಿಕಾರಿ, ಭಟ್ಕಳ.